# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 410 (477) |
| ಸದಸ್ಯರ ಹೆಸರು | | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | | 20-02-2023 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| ಅ) | ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; | ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ 2022-23ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಸಂಖ್ಯೆ: 9392. |
| ಆ) | ರಾಜ್ಯದಲ್ಲಿ ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ವೇತನ ಎಷ್ಟು; ಈಗ ನೀಡುತ್ತಿರುವ ವೇತನವು ಉಪನ್ಯಾಸಕರುಗಳಿಗೆ ಬಹಳ ಕಡಿಮೆಯಾಗಿದ್ದು, ಸರ್ಕಾರವು ವೇತನವನ್ನು ಹೆಚ್ಚಳ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು; | ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ: 18-12-2003 ರಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು, ಅರೆಕಾಲಿಕ ಉಪನ್ಯಾಸಕರ ಬದಲಿಗೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು.<br><br>ಖಾಯಂ ಉಪನ್ಯಾಸಕರಿಗೆ ವಾರಕ್ಕೆ 16/20 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿದ್ದು, ಅತಿಥಿ ಉಪನ್ಯಾಸಕರಿಗೆ ಅದರಲ್ಲಿ ಅರ್ಧದಷ್ಟು ಅಂದರೆ ಗರಿಷ್ಠ 8/10 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿತ್ತು.<br><br>ಅತಿಥಿ ಉಪನ್ಯಾಸಕರಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ ರೂ.13,000/- ಹಾಗೂ ಯು.ಜಿ.ಸಿ. ವಿದ್ಯಾರ್ಹತೆ ಇಲ್ಲದವರಿಗೆ ರೂ.11,000/-ಗಳ ಗೌರವಧನವನ್ನು ನಿಗಧಿಪಡಿಸಲಾಗಿತ್ತು.<br><br>ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರು ಸೇವಾ ಸಕ್ರಮಾತಿ, ಗೌರವಧನ ಹೆಚ್ಚಳ ಮತ್ತಿತರೆ ಬೇಡಿಕೆಗಳನ್ನು ಈಡೇರಿಸುವಂತೆ ಕೋರಿ, ದಿನಾಂಕ:10.12.2021 ರಿಂದ ಮುಷ್ಕರ ನಡೆಸಿದ ಹಿನ್ನೆಲೆಯಲ್ಲಿ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗೂ ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ವಿವರವಾದ ಅಧ್ಯಯನ ನಡೆಸಿ, ವಿಸ್ತೃತ ವರದಿಯನ್ನು ಸಲ್ಲಿಸಲು ಸರ್ಕಾರವು ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು.<br><br>ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯು ಅತಿಥಿ ಉಪನ್ಯಾಸಕರ ವಿವಿಧ ಬೇಡಿಕೆಗಳನ್ನು ಕಾನೂನಾತ್ಮಕವಾಗಿ, ಆಡಳಿತಾತ್ಮಕವಾಗಿ ಮತ್ತು ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ಪರಿಶೀಲಿಸಿ, ಸರ್ಕಾರಕ್ಕೆ ವಿಸ್ತೃತ ವರದಿಯನ್ನು ಸಲ್ಲಿಸಿತ್ತು.<br><br>ಸದರಿ ವರದಿಯನ್ನು ಪರಿಶೀಲಿಸಿದ ಸರ್ಕಾರವು ಹೊರಡಿಸಿದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 & 24.01.2022 ರಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಈ ಕೆಳಗಿನಂತೆ ಹೆಚ್ಚಿಸಲಾಗಿದೆ. |

| | | |
|---|---|---|
| | | ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)<br>ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)<br>ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)<br>ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ) |

ಇಡಿ 69 ಡಿಸಿಇ 2023

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು